ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

**S.C. No. 81/2020**

| | | | |
|---|---|---|---|
| ಸಾಕ್ಷಿಯ ಹೆಸರು | ಶ್ರೀ. ರಮೇಶ್ | ಚಾಸಾಃ | ಪ್ರಾಸಾಃ |
| ತಂದೆಯ ಹೆಸರು | ಸಿದ್ದಬೋವಿ | 3 | 1 |
| ವಯಸ್ಸು | 52 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **22.01.2026.** | |
| ಉದ್ಯೋಗ | ವ್ಯವಸಾಯ | | |
| ವಾಸ ಸ್ಥಳ | ನೆಟ್ಟಿಗೇರೆ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಈಗ ನನಗೆ ತೋರಿಸಿದ ಮಹಜರ್ ನಲ್ಲಿ ನನ್ನ ಸಹಿ ಇದ್ದು ಮಹಜರ್ ಅನ್ನು ನಿಶಾನೆ.ಪಿ. 1 ಎಂದು ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 1 (ಎ) ಎಂದು ಗುರುತಿಸಲಾಯಿತು. 2018 – 2019 ರಲ್ಲಿ ಒಂದು ದಿನ ಕಗ್ಗಲಿಪುರ ಠಾಣೆಯ ಬಳಿ ನಿಂತಿದ್ದಾಗ ಮಧ್ಯಾಹ್ನ ಸಮಯದಲ್ಲಿ ಪೋಲೀಸರನ್ನು ನನ್ನನ್ನು ಕರೆದು ನಿಶಾನೆ.ಪಿ. 1 ಕ್ಕೆ ಸಹಿ ಪಡೆದರು. ಯಾವ ಕಾರಣಕ್ಕೆ ಮಹಜರ್ ಮಾಡಿದ್ದರು ಎಂದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಲ್ಲ. ನಿಶಾನೆ.ಪಿ. 1 ರ ಒಕ್ಕಣೆ ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಹೇಳಿಕೆ ಮಾಡಿಕೊಂಡಿಲ್ಲ.

(ಈ ಸಾಕ್ಷಿಯನ್ನು ಅಭಿಯೋಜಕರು ಪ್ರತಿ ಕೂಲ ಸಾಕ್ಷಿ ಅಂತ ಪರಿಗಣಿಸಲು ಅನುಮತಿ ಕೇಳಿದ್ದು ಸಾಕ್ಷಿಯು ನೀಡಿದ್ದ ವ್ಯತಿರಿಕ್ತ ಹೇಳಿಕೆಯನ್ನು ಗಣನೆಗೆ ತೆಗೆದುಕೊಂಡು ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿನಾಂಕ 12.07.2015 ರಂದು ಪೋಲೀಸರು ನನ್ನನ್ನು ಡಾ. ಮಹದೇವ್ ರವರ ತೋಟದ ಮುಂದೆ ರಸ್ತೆಗೆ ನಮ್ಮನ್ನು ಕರೆಸಿದ್ದು ಅಲ್ಲಿ ಯಾರೋ 5 ಜನರು ಮಾರಕಾಸ್ತ್ರಗಳನ್ನು ಹಿಡಿದುಕೊಂಡು ರಸ್ತೆಯಲ್ಲಿ ದರೋಡೆಗೆ ಹೊಂಚು ಹಾಕುತ್ತಿದ್ದಾರೆ ಎಂದು ತಿಳಿಸಿ ಪಂಚರಾಗಿ ಸಹಕರಿಸಬೇಕೆಂದು ನನ್ನನ್ನು, ಕೋರಿಕೊಂಡಿದ್ದು ನಾವು ಒಪ್ಪಿದ್ದೆವು ಎಂದರೆ ಸರಿ ಅಲ್ಲ. ಪೋಲೀಸರು ನನ್ನನ್ನು ಕರೆದುಕೊಂಡು ಹೋಗಿ

ಸ್ಥಳದಲ್ಲಿ 4 ಜನರನ್ನು ವಶಕ್ಕೆ ಪಡೆದಿದ್ದು ವೆಂಕಟೇಶ್, ಅರುಣ್ ಮುತ್ತುರಾಜ್, ಮಿತುನ್ ರಾಮ್ ಎಂದು ಅವರುಗಳು ತಿಳಿಸಿದ್ದು ಓಡಿ ಹೋದವನ ಹೆಸರು ಗುಂಡಪ್ಪ ಎಂದು ತಿಳಿಯಿತು ಎಂದರೆ ಸರಿ ಅಲ್ಲ. ಆರೋಪಿತರಿಂದ ದೊಣ್ಣೆಗಳನ್ನು, ಲಾಂಗ್ ಮತ್ತು ಖಾರದ ಪುಡಿ ಪ್ಯಾಕೇಟ್ ಅನ್ನು ಸದರಿ ಮಹಜರ್ ಮೂಲಕ ವಶಪಡಿಸಿಕೊಂಡರು ಎಂದರೆ ಸರಿ ಅಲ್ಲ. ಈ ಬಗ್ಗೆ ಎರಡು ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿದ್ದರು ಎಂದರೆ ಸರಿ ಅಲ್ಲ. ನಿಶಾನೆ.ಪಿ. 1 ಅನ್ನು ಓದಿ ಹೇಳಿದ ನಂತರ ತಿಳಿದುಕೊಂಡು ಸಹಿ ಮಾಡಿದ್ದೇನೆ ಎಂದರೆ ಸರಿ ಅಲ್ಲ. ನಿಶಾನೆ.ಪಿ. 1 ರಲ್ಲಿ ಇರುವ ಎಲ್ಲಾ ವಿಚಾರ ಗೊತ್ತಿದ್ದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿ ಅಲ್ಲ. ಈ ಬಗ್ಗೆ ವಿವರಹವಾದ ಹೇಳಿಕೆ ನೀಡಿದ್ದೇನೆ ಎಂದರೆ ಸರಿ ಅಲ್ಲ. ಸಾಕ್ಷಿಯ ಹೇಳಿಕೆಯ ಭಾಗವನ್ನು ನಿಶಾನೆ.ಪಿ. 2 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

<u>ಮರು ವಿಚಾರಣೆ ಇಲ್ಲ</u>

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.